77

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತು ಸದಸ್ಯರುಗಳಾದ ಶ್ರೀ ಛಲವಾದಿ.ಟಿ ನಾರಾಯಣಸ್ವಾಮಿ, ಸಿ.ಟಿ ರವಿ, ರವಿಕುಮಾರ್ ಎಸ್, ಶ್ರೀ ಹಣಮಂತ್ ನಿರಾಣಿ, ಭೋಜೇಗೌಡ, ನವೀನ್ ಡಿ. ಎಸ್ ಅರುಣ್, ಶ್ರೀಮತಿ ಹೇಮಲತಾ ನಾಯಕ್, ಭಾರತಿಶೆಟ್ಟಿ, ಕೇಶವ ಪ್ರಸಾದ್ ಮತ್ತು ಇತರರ ನಿಯಮ 330 ಕ್ಕೆ ಉತ್ತರಿಸುವ ಬಗ್ಗೆ.**

**ಸೂಚನೆ:**

ಶೈಕ್ಷಣಿಕ ಜಾಗೃತಿ ಹೆಚ್ಚಾದಂತೆ ವಸತಿ ಶಾಲೆ ಹಾಗೂ ಹಾಸ್ಟೆಲ್ ಅವಲಂಬನೆ ಹೆಚ್ಚಾಗಿ, ವರ್ಷದಿಂದ ವರ್ಷಕ್ಕೆ ಬೇಡಿಕೆ ವಿಪರೀತವಾಗಿದೆ. ಆದರೆ, ಬಣ್ಣ ಬಣ್ಣದ ಕನಸು ಕಟ್ಟಿಕೊಂಡು ವಸತಿ ಶಾಲೆ, ಹಾಸ್ಟೆಲ್‌ಗೆ ಪ್ರವೇಶ ಪಡೆಯುವ ಮಕ್ಕಳಿಗೆ ಮೊದಲು ದರ್ಶನವಾಗುವುದೇ ಸೌಲಭ್ಯಗಳ ಮರೀಚಿಕೆಯ ತೋರಣ. ಕಾಲಕಾಲಕ್ಕೆ ಸರ್ಕಾರವು ಸಮಸ್ಯೆಯ ಆಳ ಅರಿಯದ ಪರಿಣಾಮ ಹಾಸ್ಟೆಲ್ ಮತ್ತು ವಸತಿ ಶಾಲೆಗಳಲ್ಲಿ ಸಮಸ್ಯೆಗಳು ಬೃಹದಾಕಾರವಾಗಿ ಬೆಳೆದು ನಿಂತಿದ್ದು, ಮಕ್ಕಳು ಸೌಲಭ್ಯ ಸಿಗದೆ ಅಕ್ಷರಶಃ ಶೋಷಣೆಗೆ ಒಳಗಾಗುತ್ತಿದ್ದಾರೆ. ಹಲವು ಇಲಾಖೆಯಡಿ ನಿರ್ವಹಣೆಯಾಗುತ್ತಿರುವ ಹಾಸ್ಟೆಲ್, ವಸತಿ ನಿಲಯಗಳು ಗುಣಮಟ್ಟದ ಆಹಾರದ ಕೊರತೆ, ಆಶ್ರಯ ಕೊರತೆ, ಮೂಲಸೌಕರ್ಯಗಳ ಕೊರತೆ, ನಿರ್ವಹಣೆಯ ಕೊರತೆ, ವಾರ್ಡನ್‌ಗಳ ಕೊರತೆ ಮತ್ತು ಹೀಗೆ ಹತ್ತಾರು ಸಮಸ್ಯೆಗಳನ್ನು ಎದುರಿಸುತ್ತಿವೆ. ಹಾಸ್ಟೆಲ್‌ಗಳು ಮತ್ತು ವಸತಿ ಶಾಲೆಗಳು ದುಸ್ಥಿತಿಯಲ್ಲಿವೆ. ಅಲ್ಲಿ ಸರಿಯಾದ ಶೌಚಗೃಹ, ಸ್ನಾನಗೃಹಗಳು ಇಲ್ಲದೇ ತೆರೆದ ಜಾಗದಲ್ಲಿ ನಿತ್ಯಕರ್ಮಗಳನ್ನು ಪೂರೈಸಬೇಕಿದೆ. ಹೀಗೆ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವ ವಸತಿ ಶಾಲೆಗಳು ಮತ್ತು ಹಾಸ್ಟೆಲ್‌ಗಳಲ್ಲಿ ಕಲಿಕೆ ಮಾಡುತ್ತಿರುವ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟದಲ್ಲಿದ್ದು, ಅವರ ಕಲಿಕೆಗೆ ಕಷ್ಟವಾಗುತ್ತಿರುವ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಬಯಸುತ್ತೇವೆ.

**ಉತ್ತರ:**

**ಸಮಾಜ ಕಲ್ಯಾಣ ಇಲಾಖೆ ವಿವರ:**

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 1215 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳನ್ನು ಹಾಗೂ 719 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಮತ್ತು 04 ದೀನದಯಾಳ್ ಉಪಾಧ್ಯಾಯ ವಿದ್ಯಾರ್ಥಿ ನಿಲಯಗಳನ್ನು ನಿರ್ವಹಿಸಲಾಗುತ್ತಿದೆ.

**ವಿದ್ಯಾರ್ಥಿ ನಿಲಯಗಳ ಪ್ರವೇಶ:-**

ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪ.ಜಾತಿ/ಪ.ವರ್ಗದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ. ವಿದ್ಯಾರ್ಥಿ ನಿಲಯಗಳ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ವ್ಯವಸ್ಥೆಯನ್ನು ಆನ್‌ಲೈನ್ ಮೂಲಕ ಇಲಾಖೆ ವೆಬ್‌ಸೈಟ್‌ನ Hostel Management Information System (HMIS) ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, 2024-25ನೇ ಸಾಲಿಗೆ ಪ್ರವೇಶ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾಗುವ ವಿದ್ಯಾರ್ಥಿ ನಿಲಯಗಳ ಕಟ್ಟಡದ ಸಾಮರ್ಥ್ಯನುಸಾರ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ ಹೆಚ್ಚುವರಿ ವಿದ್ಯಾರ್ಥಿಗಳನ್ನು ಬಾಡಿಗೆ ಕಟ್ಟಡ ಪಡೆದು ಪ್ರವೇಶಾತಿ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.

ಸದರಿ ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕಗಳನ್ನು ಸರಬರಾಜು ಮಾಡಿ ಪೂರೈಸುವ ಸಂಬಂಧ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಕಾರ್ಯಾದೇಶ ದಿನಾಂಕ:27-02-2025ರಲ್ಲಿ ಕೆಟಿಪಿಪಿ ಅಧಿನಿಯಮದಡಿ ವಿನಾಯಿತಿ ಪಡೆದ ಮೇ|| ಎಂಎಸ್‌ಐಎಲ್ ಸಂಸ್ಥೆಯಿಂದ ಖರೀದಿಸಿ ಪೂರೈಸಲಾಗಿದೆ. ಅಂತೆಯೇ, ಸಮವಸ್ತ್ರವನ್ನು ಕೆಹೆಚ್‌ಡಿಸಿ ಸಂಸ್ಥೆಯಿಂದ ಶುಚಿ ಸಂಭ್ರಮ ಕಿಟ್‌ಗಳನ್ನು ಕೆಹೆಚ್‌ಡಿಎಲ್ ಸಂಸ್ಥೆಯಿಂದ ಹಾಗೂ ಶೂ ಮತ್ತು ಸಾಕ್ಸ್ ಗಳನ್ನು ಇ-ಟೆಂಡರ್ ಪ್ರಕ್ರಿಯೆ ಮೂಲಕ ಖರೀದಿ ನಿಗದಿತ ಸಮಯದಲ್ಲಿ ಪೂರೈಸಲು ಕ್ರಮವಹಿಸಲಾಗಿದೆ.

ಸಮಾಜ ಕಲ್ಯಾಣ ಇಲಾಖೆಯಿಂದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಂಬಂಧ ರಾಜ್ಯ ವಲಯದ ವಿದ್ಯಾರ್ಥಿ ನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಡೀಸೆಲ್ ಜನರೇಟರ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ ಕ್ಯಾಮರಾಗಳನ್ನು ಕೆಟಿಪಿಪಿ ನಿಯಮಾವಳಿಗಳನ್ವಯ ಇ-ಟೆಂಡರ್ ಮೂಲಕ ಖರೀದಿಸಿ ಪೂರೈಸಲಾಗುತ್ತಿದೆ.

ವಿದ್ಯಾರ್ಥಿ ನಿಲಯಗಳಲ್ಲಿ ಅಗತ್ಯವಿರುವ ಇತರೆ ಮೂಲಭೂತ ಸಾಮಗ್ರಿಗಳಾದ ಯುಪಿಎಸ್, ವಾಟರ್ಪ್ಯೂರಿಫೈರ್, ಲೈಬ್ರರಿ ಬುಕ್ಸ್, ಕ್ರೀಡಾ ಸಾಮಗ್ರಿಗಳು, ಇನ್ಸಿನೇಟರ್, ಬೆಂಕಿ ನಂದಿಸುವ ಉಪಕರಣ, ಪಾತ್ರೆ ಪರಿಕರಗಳು ಹಾಗೂ ಇತರೆ ತುರ್ತು ಸಾಮಗ್ರಿಗಳ ಖರೀದಿಗಾಗಿ ಜಿಲ್ಲಾ ಮಟ್ಟಗಳಲ್ಲಿ ಅನುಷ್ಠಾನಗೊಳಿಸಲು ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ. ವಿದ್ಯಾರ್ಥಿ ನಿಲಯಗಳ ಸಮರ್ಪಕ ನಿರ್ವಹಣೆ ಸಂಬಂಧ ಕ್ರಮಕೈಗೊಳ್ಳಲಾಗಿದೆ.

ಚಾಲ್ತಿಯಲ್ಲಿರುವ ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳು 2022 ರ ವಾರ್ಡನ್ (ಪುರುಷ) ಹಾಗೂ ವಾರ್ಡನ್ (ಮಹಿಳೆ) ಎಂಬ ಪ್ರತ್ಯೇಕ ಹುದ್ದೆಗಳಿದ್ದು ಶೇಕಡಾ 80% ರಷ್ಟು ಹುದ್ದೆಗಳನ್ನು ಯಾವುದೇ ಪದವಿ ವಿದ್ಯಾರ್ಹತೆಯೊಂದಿಗೆ ಬಿ.ಇಡಿ ಹೊಂದಿದ ಅಭ್ಯರ್ಥಿಗಳಿಂದ ನೇರನೇಮಕಾತಿ ಮೂಲಕ ಹಾಗೂ ಶೇ 20% ರಷ್ಟು ಹುದ್ದೆಗಳನ್ನು ಪದವಿ ವಿದ್ಯಾರ್ಹತೆಯೊಂದಿಗೆ ಈ ಮುಂದಿನ ಪೋಷಕ ವೃಂದದ ಹುದ್ದೆಗಳಿಂದ ಕ್ರಮವಾಗಿ ವಸತಿ ಶಾಲಾ ಶಿಕ್ಷಕರಿಂದ ಶೇ 10% ರಷ್ಟು ಹಾಗೂ ಶೇ. 10% ರಷ್ಟು ಜೂನಿಯರ್ ವಾರ್ಡನ್ ಹುದ್ದೆಯಲ್ಲಿನ ನೌಕರರುಗಳಿಂದ ಭರ್ತಿಗೆ ಅವಕಾಶ ಕಲ್ಪಿಸಲಾಗಿದೆ.

ಪ್ರತಿ ನಿಲಯದಲ್ಲಿ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿಯೇ Mess Committee ಅನ್ನು ರಚಿಸಿ, ಗುಣಮಟ್ಟ ಕಾಯ್ದುಕೊಳ್ಳಲಾಗಿರುತ್ತದೆ. ಹಾಗೂ ವಿದ್ಯಾರ್ಥಿನಿಲಯಗಳಲ್ಲಿನ ಶೌಚಾಲಯ ಸ್ವಚ್ಛತೆ ಹಾಗೂ ನೈರ್ಮಲ್ಯದ ಕುರಿತಾಗಿ Sanitation committee ಯನ್ನು ರಚಿಸಲಾಗಿರುತ್ತದೆ. ಇಲಾಖೆಯ ಸರ್ಕಾರಿ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಶುಚಿತ್ವ ಹಾಗೂ ನೈರ್ಮಲ್ಯ ಮತ್ತು ರುಚಿಯಾದ ಊಟ-ತಿಂಡಿ ತಯಾರಿಸುವ ಕುರಿತು International institute of Hotel Management Bangalore ರವರಿಂದ ಬೆಂಗಳೂರು ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ತರಬೇತಿ ನೀಡಲಾಗಿದ್ದು, ಉಳಿದ ಎಲ್ಲಾ ಜಿಲ್ಲೆಗಳಿಗೂ ಇದೇ ಮಾದರಿ ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ನೀಡಲಾಗಿರುತ್ತದೆ.

**ಕೊಠಡಿ ಹಾಗೂ ಶೌಚಾಲಯ:** ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ವಾಸದ ಕೊಠಡಿ, ಶೌಚಾಲಯ, ಸ್ನಾನಗೃಹಗಳನ್ನು ನಿರ್ಮಾಣ ಹಾಗೂ ಅಗತ್ಯ ದುರಸ್ತಿ/ಉನ್ನತೀಕರಣ ಕಾಮಗಾರಿಗಳನ್ನು ಕೈಗೊಳ್ಳುವ ಸಂಬಂಧವಾಗಿ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮೂಲಕ ಸೂಕ್ತ ಪ್ರಸ್ತಾವನೆ ಪಡೆದು ಅನುದಾನ ಲಭ್ಯತೆಯನ್ನು ಆಧರಿಸಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ.

**ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ/ಕಾಲೇಜುಗಳ ವಿವರ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 874 (ಪರಿಶಿಷ್ಟ ಜಾತಿ -539, ಪರಿಶಿಷ್ಟ ವರ್ಗ-156 ಹಾಗೂ ಹಿಂದುಳಿದ ವರ್ಗ-179) ವಸತಿ ಮೊರಾರ್ಜಿ ದೇಸಾಯಿ/ರಾಣಿ ಚೆನ್ನಮ್ಮ/ ಅಟಲ್ ಬಿಹಾರಿ ವಾಜಪೇಯಿ/ನವೋದಯ ವಸತಿ ಶಾಲೆಗಳು ಮಂಜೂರಾಗಿ ಕಾರ್ಯನಿರ್ವಹಿಸುತ್ತಿವೆ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ 2025-26ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ಒಂದೇ ಬಾರಿಗೆ (One Time) ರೂ.213.00 ಕೋಟಿಗಳ ವೆಚ್ಚದಲ್ಲಿ 13 ವಿವಿಧ ಬಗೆಯ ಮೂಲಭೂತ ಸಾಮಗ್ರಿಗಳಾದ ಡೆಸ್ಕ್ ಕಮ್ ಬೆಂಚ್ 5 ಸೀಟರ್, ಟು ಟೈರ್ ಕಾಟ್, ಹಾಸಿಗೆಗಳು, ದಿಂಬುಗಳು, ಬೆಡ್‌ಶೀಟ್, ಬೆಡ್‌ಸ್ಪ್ರೆಡ್, ತಟ್ಟೆ-ಲೋಟಗಳು, ಪಾತ್ರೆ ಪರಿಕರಗಳು (ಸೆಟ್‌ಗಳಲ್ಲಿ), ವಾಟರ್ ಪ್ಯೂರಿಫೈಯರ್, ಪಾಠೋಪಕರಣಗಳು, ನರ್ಸಿಂಗ್ ಕಿಟ್, ಗ್ರೈಂಡರ್, ಪ್ರಯೋಗಾಲಯ ಸಾಮಗ್ರಿಗಳು (ಸೆಟ್ ಗಳಲ್ಲಿ), ಪ್ರೊಜೆಕ್ಟರ್ ಮತ್ತು ಸ್ಕ್ರೀನ್ ಸೇರಿದಂತೆ ಒಟ್ಟು 13 ಬಗೆಯ ಸಾಮಗ್ರಿಗಳ ಪೈಕಿ ಕೆಲವು ಸಾಮಗ್ರಿಗಳಿಗೆ ಸರಬರಾಜು ಆದೇಶವನ್ನು ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಟು ಟೈರ್ ಕಾಟ್, ಗ್ರೈಂಡರ್ ಮತ್ತು ಡೆಸ್ಕ್ ಕಂ ಬೆಂಚ್ ಗಳಿಗೆ 2ನೇ ಬಾರಿ ಟೆಂಡರ್ ಆಹ್ವಾನಿಸಿ ತಾಂತ್ರಿಕ ಪರಿಶೀಲನಾ ಹಂತದಲ್ಲಿದು, ತ್ವರಿತವಾಗಿ ಟೆಂಡರ್ ಪ್ರಕ್ರಿಯೆಯನ್ನು ಹಂತಿಮಗೊಳಿಸಲಾಗುವುದು.

ಸಂಘದ ಅಧೀನದಲ್ಲಿ ಒಟ್ಟು 874 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ವಸತಿ ಶಾಲೆ/ ಕಾಲೇಜುಗಳಿಗೆ 19860 (9261 ಬೋಧಕ, 2386 ಬೋಧಕೇತರ, 8213-ಗ್ರೂಪ್-ಡಿ) ಬೋಧಕ, ಬೋಧಕೇತರ ಮತ್ತು ಗ್ರೂಪ್-ಡಿ ವೃಂದದ ಹುದ್ದೆಗಳು ಮಂಜೂರಾಗಿರುತ್ತವೆ. ಈ ಪೈಕಿ 5456 ಬೋಧಕರು 1127 ಬೋಧಕೇತರ ಖಾಯಂ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.

ಖಾಲಿ ಇರುವ ಹುದ್ದೆಗಳ ಎದುರಾಗಿ ಜಿಲ್ಲಾ ಹಂತದಲ್ಲಿ ಅತಿಥಿ ಶಿಕ್ಷಕರು/ಹೊರಸಂಪನ್ಮೂಲ ಏಜೆನ್ಸಿ ಮೂಲಕ ಶಿಕ್ಷಕರು/ಬೋಧಕೇತರ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ಪಡೆದು ವಸತಿ ಶಾಲೆಗಳನ್ನು ನಿರ್ವಹಿಸಲಾಗುತ್ತಿದೆ, ಗ್ರೂಪ್-ಡಿ ವೃಂದದ ಹುದ್ದೆಗಳನ್ನು ಜಿಲ್ಲಾ ಹಂತದಲ್ಲಿ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಸೇವೆಯನ್ನು ಪಡೆಯಲಾಗುತ್ತಿದೆ.

ಸಕಇ 293 ಎಂಡಿಎಸ್ 2025

(ಡಾ. ಹೆಚ್.ಸಿ ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು

77
+2

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಛಲವಾದಿ ಟಿ ನಾರಾಯಣಸ್ವಾಮಿ, ಶ್ರೀ ಎನ್.ರವಿಕುಮಾರ್ ಹಾಗೂ ಶ್ರೀ ಸಿ.ಟಿ.ರವಿ ಹಾಗೂ ಇತರರು ನಿಯಮ-330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.

*****

**ಪ್ರಶ್ನೆ:-**

ಶೈಕ್ಷಣಿಕ ಜಾಗೃತಿ ಹೆಚ್ಚಾದಂತೆ ವಸತಿ ಶಾಲೆ ಹಾಗೂ ಹಾಸ್ಟೆಲ್ ಅವಲಂಬನೆ ಹೆಚ್ಚಾಗಿ. ವರ್ಷದಿಂದ ವರ್ಷಕ್ಕೆ ಬೇಡಿಕೆ ವಿಪರೀತವಾಗಿದೆ. ಆದರೆ, ಬಣ್ಣ ಬಣ್ಣದ ಕನಸು ಕಟ್ಟಿಕೊಂಡು ವಸತಿ ಶಾಲೆ, ಹಾಸ್ಟೆಲ್‌ಗೆ ಪ್ರವೇಶ ಪಡೆಯುವ ಮಕ್ಕಳಿಗೆ ಮೊದಲು ದರ್ಶನವಾಗುವುದೇ ಸೌಲಭ್ಯಗಳ ಮರೀಚಿಕೆಯ ತೋರಣ. ಕಾಲಕಾಲಕ್ಕೆ ಸರ್ಕಾರವು ಸಮಸ್ಯೆಯ ಆಳ ಅರಿಯದ ಪರಿಣಾಮ ಹಾಸ್ಟೆಲ್ ಮತ್ತು ವಸತಿ ಶಾಲೆಗಳಲ್ಲಿ ಸಮಸ್ಯೆಗಳು ಬೃಹದಾಕಾರವಾಗಿ ಬೆಳೆದು ನಿಂತಿದ್ದು, ಮಕ್ಕಳು ಸೌಲಭ್ಯ ಸಿಗದೆ ಅಕ್ಷರಶಃ ಶೋಷಣೆಗೆ ಒಳಗಾಗುತ್ತಿದ್ದಾರೆ. ಹಲವು ಇಲಾಖೆಯಡಿ ನಿರ್ವಹಣೆಯಾಗುತ್ತಿರುವ ಹಾಸ್ಟೆಲ್, ವಸತಿ ನಿಲಯಗಳು ಗುಣಮಟ್ಟದ ಆಹಾರದ ಕೊರತೆ. ಆಶ್ರಯ ಕೊರತೆ. ಮೂಲಸೌಕರ್ಯಗಳ ಕೊರತೆ, ನಿರ್ವಹಣೆಯ ಕೊರತೆ, ವಾರ್ಡನ್‌ಗಳ ಕೊರತೆ ಮತ್ತು ಹೀಗೆ ಹತ್ತಾರು ಸಮಸ್ಯೆಗಳನ್ನು ಎದುರಿಸುತ್ತಿವೆ. ಹಾಸ್ಟೆಲ್‌ಗಳು ಮತ್ತು ವಸತಿ ಶಾಲೆಗಳು ದುಸ್ಥಿತಿಯಲ್ಲಿವೆ. ಅಲ್ಲಿ ಸರಿಯಾದ ಶೌಚಗೃಹ, ಸ್ನಾನಗೃಹಗಳು ಇಲ್ಲದೇ ಕೆಲವು ಕಡೆ ತೆರೆದ ಜಾಗದಲ್ಲಿಯೇ ನಿತ್ಯಕರ್ಮಗಳನ್ನು ಪೂರೈಸಬೇಕಿದೆ. ಹೀಗೆ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವ ವಸತಿ ಶಾಲೆಗಳು ಮತ್ತು ಹಾಸ್ಟೆಲ್‌ಗಳಲ್ಲಿ ಕಲಿಕೆ ಮಾಡುತ್ತಿರುವ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟದಲ್ಲಿದ್ದು, ಅವರ ಕಲಿಕೆಗೆ ಕಷ್ಟವಾಗುತ್ತಿರುವ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇವೆ.

**ಉತ್ತರ:-**

2025-26ನೇ ಶೈಕ್ಷಣಿಕ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ 186 ಅಲ್ಪಸಂಖ್ಯಾತರ ವಿವಿಧ ವಸತಿ ಶಾಲೆಗಳು, ಪದವಿ ಪೂರ್ವ ಕಾಲೇಜುಗಳು ಹಾಗೂ 405 ಮೆಟ್ರಿಕ್ ಪೂರ್ವ/ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ.

50 ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ವಸತಿ ಶಾಲೆಗಳ ದಾಖಲಾತಿಯನ್ನು ದ್ವಿಗುಣಗೊಳಿಸುವ ಮೂಲಕ ಹೆಚ್ಚುವರಿ 12,500 ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿದೆ. 62 ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ವಸತಿ ಶಾಲೆಗಳನ್ನು 6ನೇ ತರಗತಿಯಿಂದ 12ನೇ ತರಗತಿಯವರೆಗೆ Integrated ಶಾಲೆಗಳನ್ನಾಗಿ ಉನ್ನತೀಕರಿಸಿ ಪದವಿ ಪೂರ್ವ ತರಗತಿಗಳನ್ನು ಪ್ರಾರಂಭಿಸಲಾಗಿದೆ.

2025-26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ವಸತಿ ಶಾಲೆ ಹಾಗೂ ಕಾಲೇಜು ವಸತಿ ನಿಲಯಗಳಲ್ಲಿ ಒಟ್ಟು 81,404 ವಿದ್ಯಾರ್ಥಿಗಳು ದಾಖಲಾತಿಯಾಗಿರುತ್ತಾರೆ.

ಒದಗಿಸುವ ಅನುದಾನದಲ್ಲಿ ಅನುದಾನದ ಲಭ್ಯತೆಗನುಗುಣವಾಗಿ ಎಲ್ಲಾ ವಸತಿ ಶಾಲೆ/ನಿಲಯಗಳ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳುವ ಗುರಿಯನ್ನು ಹೊಂದಲಾಗಿದೆ.

2023ರಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸಂಬಂಧಪಟ್ಟ ಸಂಸ್ಥೆಗಳಿಗೆ ಅಗತ್ಯವಿರುವ ಆಹಾರ ಸಾಮಾಗ್ರಿಗಳನ್ನು ಪೂರೈಕೆ ಮಾಡಲು ಜಿಲ್ಲಾ ಆಹಾರ ಪದಾರ್ಥಗಳ ಖರೀದಿ ಸಮಿತಿಯನ್ನು ಹಾಗೂ ಕರ್ನಾಟಕ ಪಾರದರ್ಶಕ ಕಾಯ್ದೆ, 1999ರ ಕಲಂ 9 ಮತ್ತು 10 ರನ್ವಯ ಟೆಂಡರ್ ಆಹ್ವಾನಿಸಲು, ಪರಿಶೀಲಿಸಲು ಹಾಗೂ ಅಂಗೀಕರಿಸಲು ಪ್ರಾಧಿಕಾರಗಳನ್ನು ರಚಿಸಲು ಸರ್ಕಾರದ ಅನುಮತಿ ನೀಡಲಾಗಿದೆ.

.......2

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ವಿವಿಧ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಊಟೋಪಚಾರವನ್ನು ನೀಡಲು ಪರಿಷ್ಕೃತ ಮೆನುಚಾರ್ಟ್‌ನಂತೆ ವಿದ್ಯಾರ್ಥಿಗಳಿಗೆ ಊಟೋಪಚಾರವನ್ನು ನೀಡಲಾಗುತ್ತಿದೆ.

ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಬೇಕಾಗಿರುವ ಎರಡು ಜೊತೆ ಸಿದ್ಧಪಡಿಸಿದ ಸಮವಸ್ತ್ರಗಳು(ಒಂದು ಬಣ್ಣದ+ಒಂದು ಬಿಳಿ ಬಣ್ಣದ), ಎರಡು ಜೊತೆ ಶೂ, ಸಾಕ್ಸ್, ಟೈ, ಬೆಲ್ಟ್ ಹಾಗೂ ಬ್ರಷ್, ನೋಟ್‌ಪುಸ್ತಕಗಳು, ಲೇಖನಾ ಸಾಮಗ್ರಿ Geometry, Blue pen, Red pen, Black Pen, Pencil, Exam Pad, Eraser, Sharpener, Sketch Pen, 20 Notebooks, School Bag), ಪಠ್ಯಪುಸ್ತಕಗಳು, ಶುಚಿ ಸೋಪ್ ಕಿಟ್, ಗ್ರಂಥಾಲಯ ಸೌಲಭ್ಯ, ಡಿಜಿಟಲ್ ಕ್ಲಾಸ್, ಪ್ರಯೋಗಾಲಯ ಹಾಗೂ ಅಗತ್ಯ ಪೀಠೋಪಕರಣಗಳನ್ನು ಕಾಲಕಾಲಕ್ಕೆ ಒದಗಿಸಲಾಗುತ್ತಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ವಿವಿಧ ವಸತಿ ಶಾಲೆ/ಕಾಲೇಜು ಮತ್ತು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳಾದ ಡ್ಯೂಯಲ್ ಡೆಸ್ಕ್, ಟೂ ಟಯರ್ ಕಾಟ್, ಡೈನಿಂಗ್ ಟೇಬಲ್, ಬೆಡ್, ಬೆಡ್‌ಶೀಟ್, ದಿಂಬು, ಜಮಖಾನ, ಅಡುಗೆ ಮನೆ ಪಾತ್ರೆ ಪಳಗ, ಸಿಸಿಟಿವಿ, ಸೋಲಾರ್ ವಾಟರ್ ಹೀಟರ್ ಹಾಗೂ ಇತರೆ ಮೂಲಸೌಕರ್ಯಗಳನ್ನು ಅನುದಾನ ಲಭ್ಯತೆ ಅನುಗುಣವಾಗಿ ಒದಗಿಸಲಾಗುತ್ತಿದೆ.

ಪ್ರಸ್ತುತ ಚಾಲ್ತಿಯಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ 2011ರ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದ ಪ್ರಸ್ತಾವನೆಯು ಪ್ರಸ್ತುತ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ವೃಂದ ಪರಿಶೀಲನಾ ಸಮಿತಿಯಲಿದ್ದು, ಸದರಿ ನಿಯಮಗಳು ಪರಿಷ್ಕರಣೆ ಆದ ನಂತರದಲ್ಲಿ ಖಾಲಿ ಇರುವ 347 ನಿಲಯಪಾಲಕರ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು.

ಒಟ್ಟು 674 ಕಟ್ಟಡಗಳ ಪೈಕಿ 472 ಸ್ವಂತ ಕಟ್ಟಡಗಳು ಹಾಗೂ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿರುವ ಶಾಲೆ/ಕಾಲೇಜು/ವಸತಿ ನಿಲಯಗಳು 101 ಮತ್ತು ಕಟ್ಟಡ ನಿರ್ಮಾಣ ಕಾಮಗಾರಿ ಬಾಕಿ ಇರುವ ಶಾಲೆ/ಕಾಲೇಜು ನಿಲಯಗಳ ಸಂಖ್ಯೆ:101 ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ/ ಕಾಲೇಜು/ ನಿಲಯಗಳಲ್ಲಿ ವಿದ್ಯಾರ್ಥಿಗಳ ಸಂಖ್ಯಾಬಲಕ್ಕೆ ಅನುಗುಣವಾಗಿ ಅವಶ್ಯಕತೆಗೆ ತಕ್ಕಂತೆ ಶೌಚಾಲಯ ಹಾಗೂ ಸ್ನಾನ ಗೃಹಗಳನ್ನು ನಿರ್ಮಾಣ ಪ್ರಯೋಗಾಲಯ, ಗ್ರಂಥಾಲಯ ವ್ಯವಸ್ಥೆ ಮಾಡಲಾಗಿರುವುದರಿಂದ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ.

ಮುಂದುವರೆದು, ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ/ ಕಾಲೇಜು ಹಾಗೂ ವಿದ್ಯಾರ್ಥಿನಿಲಯಗಳಿಗೆ ಅವಶ್ಯಕತೆಗೆ ತಕ್ಕಂತೆ ಮೂಲಭೂತ ಸೌಕರ್ಯಗಳಾದ ಶೌಚಾಲಯ ಹಾಗೂ ಸ್ನಾನ ಗೃಹಗಳನ್ನು ಲಭ್ಯವಿರುವಂತಹ ಕಟ್ಟಡಗಳನ್ನು ಬಾಡಿಗೆ ಪಡೆದು ನಿರ್ವಹಿಸಲಾಗುತ್ತಿದ್ದು, ಇದರಿಂದಾಗಿ, ಇಲಾಖೆಯ ಯಾವುದೇ ವಸತಿ ಶಾಲೆ/ ಕಾಲೇಜು ಹಾಗೂ ನಿಲಯಗಳಲ್ಲಿ ಸಮಸ್ಯೆ ಉಂಟಾಗುತ್ತಿರುವುದಿಲ್ಲ. ಸಮಸ್ಯೆ ಬಂದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದ್ದು ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಅಗತ್ಯತೆಗೆ ತಕ್ಕಂತೆ ಪೂರೈಸಲು ಕ್ರಮವಹಿಸಲಾಗುವುದು.

ಕಡತ ಸಂಖ್ಯೆ: MWD-LMQ/247/2025

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು